16

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಚಾಮರಾಜನಗರ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದ ಕುಡಿಯುವ ನೀರಿನ ತುರ್ತು ಕಾಮಗಾರಿಗಳಿಗೆ ವಿಶೇಷ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:** ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಚಾಮರಾಜನಗರ ರವರ ಪತ್ರ ಸಂಖ್ಯೆ: ಜಿಪಂಚಾ/ಅಭಿ/2/ಕು.ನೀ.ಯೋ/ಪಿಆರ್/2011-12, ದಿನಾಂಕ:09.06.2011.

---

**ಪೀಠಿಕೆ:**

ಚಾಮರಾಜನಗರ ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದ ಗ್ರಾಮೀಣ ಪ್ರದೇಶಗಳಲ್ಲಿ ತೀವ್ರ ಕುಡಿಯುವ ನೀರಿನ ಸಮಸ್ಯೆಯಿರುವ ಕುರಿತು ಪರಿಶೀಲಿಸಿ, ಅಗತ್ಯ ಕ್ರಮ ಕೈಗೊಳ್ಳಲು ಮೇಲೆ ಓದಲಾದ ಪ್ರಸ್ತಾವನೆಯಲ್ಲಿ CEO/ZP ಚಾಮರಾಜನಗರ ಇವರು ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಜಾಗ್ರತೆಯಾಗಿ ವಿಶೇಷ ಅನುದಾನ ಬಿಡುಗಡೆ ಮಾಡಲು ಸರ್ಕಾರವನ್ನು ವಿನಂತಿಸಿರುತ್ತಾರೆ. ಈಗಾಗಲೇ ಗ್ರಾಅಪಂ.ರಾಜ್ ಇಲಾಖೆಯಿಂದ ಶಾಸಕರ ಕಾರ್ಯಪಡೆಗಳಿಗೆ ಕ್ಷೇತ್ರವಾರು ಅನುದಾನ ಬಿಡುಗಡೆ ಮಾಡಿರುವುದರಿಂದ ಮತ್ತು ಕಂದಾಯ ಇಲಾಖೆಯೂ ಸಹ CRF/NCCFನಡಿ ಕುಡಿಯುವ ನೀರಿನ ಪರಿಹಾರ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡಿರುವುದರಿಂದ, ಸದ್ಯಕ್ಕೆ ರೂ.20.00ಲಕ್ಷ ಅನುದಾನವನ್ನು ಚಾಮರಾಜನಗರ ಜಿಲ್ಲಾ ಪಂಚಾಯತ್‌ಗೆ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಬಿಡುಗಡೆ ಮಾಡಲು ನಿರ್ಧರಿಸಿದೆ. ಆದ್ದರಿಂದ, ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/62/ ಗ್ರಾನೀಸ(2) 2011 ಬೆಂಗಳೂರು, ದಿನಾಂಕ: 20-06-2011**

ಪೀಠಿಕೆಯಲ್ಲಿರುವ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಚಾಮರಾಜನಗರ ಜಿಲ್ಲಾ ಪಂಚಾಯತ್‌ನ ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರದ ಗ್ರಾಮೀಣ ಪ್ರದೇಶಗಳಲ್ಲಿ ತಲೆದೋರಿರುವ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸಲು ಸ್ಥಳೀಯ ಅಗತ್ಯತೆಯನುಸಾರ ಕುಡಿಯುವ ನೀರಿನ ಕಾಮಗಾರಿಗಳನ್ನು ಆದ್ಯತೆ ಮೇಲೆ ಅನುಷ್ಠಾನಗೊಳಿಸಲು ರೂ.20.00ಲಕ್ಷ (ಇಪ್ಪತ್ತು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು 2011-12ನೇ ಸಾಲಿಗೆ ರಾಜ್ಯ ವಲಯದ C&Q ಘಟಕದಡಿ ಚಾಮರಾಜನಗರ ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಅನುಷ್ಠಾನಗೊಳಿಸುವ ಕಾಮಗಾರಿಗಳ ವಿವರಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳ ಮಾಹಿತಿಗಾಗಿ ಕಳುಹಿಸುವುದು. ಕಾಮಗಾರಿ ಅನುಷ್ಠಾನಗೊಳಿಸುವ ಮುನ್ನ ಪ್ರಶ್ನಿತ ಕಾಮಗಾರಿಗಳು 2011-12ರ ಸಾಲಿನ ಕ್ರಿಯಾಯೋಜನೆಯಡಿ ಸೇರ್ಪಡೆಯಾಗದಿರುವುದನ್ನು ಖಾತ್ರಿ ಪಡಿಸಿಕೊಳ್ಳತಕ್ಕದ್ದು. ಕಾಮಗಾರಿಗಳ ಅನುಷ್ಠಾನಕ್ಕೆ ಮುನ್ನ ಸಕ್ಷಮ ಪ್ರಾಧಿಕಾರದಿಂದ ತಾಂತ್ರಿಕ ಅನುಮೋದನೆ ಪಡೆದುಕೊಳ್ಳತಕ್ಕದ್ದು.

3. ಈ ಅನುದಾನವನ್ನು ರಾಜ್ಯ ವಲಯದ ಲೆಕ್ಕಶೀರ್ಷಿಕೆ: 4215-01-102-9-01-059ರಡಿ ಗಣನೆಗೆ ತೆಗೆದುಕೊಂಡು, RTGS ಮುಖೇನ ಈಗಾಗಲೇ Coverage & Qualityಯಡಿ ಗೊತ್ತುಪಡಿಸಿರುವ SWSM ಬ್ಯಾಂಕ್ ಖಾತೆ ಮುಖೇನ ವಿನಿಯೋಗಿಸತಕ್ಕದ್ದು. ಸದರಿ ಅನುದಾನ ವಿನಿಯೋಗದ ಆರ್ಥಿಕ ಮತ್ತು ಭೌತಿಕ ಪ್ರಗತಿಗಳನ್ನು CE/PRED ಹಾಗೂ ಚಾಮರಾಜನಗರ ಜಿಲ್ಲಾ ಪಂಚಾಯತ್ IMISನಲ್ಲಿ ದಾಖಲಿಸತಕ್ಕದ್ದು.

4. ಈ ಆದೇಶವನ್ನು ಆರ್ಥಿಕ ಇಲಾಖೆ ಸಹಮತಿ ಸಂಖ್ಯೆ: FD 149 Exp.6/2011, ದಿ:08.03.2011 ಹಾಗೂ ಗ್ರಾಅಪಂ.ರಾಜ್ ಇಲಾಖೆಯ IFAರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ: ಗ್ರಾಅಪ 03/ಆಂ.ಆ.ಸ/2011, ದಿನಾಂಕ 01.4.2011ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ರಾಮಕೃಷ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು:

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು-1)ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ ಬೆಂ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ಇವರ ಆಪ್ತ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಬೆಂಗಳೂರು.
9. ವಿಶೇಷಾಧಿಕಾರಿಗಳು(ಜಿಪಂ)ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು,ಆರ್ಥಿಕ ಇಲಾಖೆ, ವಿಧಾನಸೌಧ.
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಸಂಕೀರ್ಣ,ನಂ55, 4ನೇ ಮಹಡಿ, ಅಭಯ ಕಾಂಪ್ಲೆಕ್ಸ್, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂ-20.
12. ಜಿಲ್ಲಾಧಿಕಾರಿಗಳು ಚಾಮರಾಜನಗರ.
13. ಜಿಲ್ಲಾ ಪಂಚಾಯತ್ ಅಧ್ಯಕ್ಷರು, ಚಾಮರಾಜನಗರ.
14. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳು, ಚಾಮರಾಜನಗರ
15. ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಗುಂಡ್ಲುಪೇಟೆ, ಚಾಮರಾಜನಗರ ಜಿಲ್ಲೆ.
16. ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಅಧೀಕ್ಷಕ ಅಭಿಯಂತರರು, ಬೆಂಗಳೂರು.
17. ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿಯರ್, ಚಾಮರಾಜನಗರ
18. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED, ಬೆಂಗಳೂರು-20.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
20. ನಿರ್ದೇಶಕರು KRWSSA ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ / ನಿರ್ದೇಶಕರು(ಗ್ರಾಮಸ್ವರಾಜ್)/ ಆಂತರಿಕ ಆರ್ಥಿಕ ಸಲಹೆಗಾರರು, / ಅಪರ ನಿರ್ದೇಶಕರು, ಆರ್ಥಿಕ – KRWSSA, RDPR ಇಲಾಖೆ ಇವರುಗಳ ಆಪ್ತ ಸಹಾಯಕರು.
21. ಮ್ಯಾನೇಜರ್ ಸಿಂಡಿಕೇಟ್ ಬ್ಯಾಂಕ್, BWSSB Branch, ರಾಜಧೂತ್ ಕಾಂಪ್ಲೆಕ್ಸ್, ಅವೆನ್ಯೂರಸ್ತೆ, ಬೆಂಗಳೂರು.
22. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
23. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5ಪ್ರತಿಗಳು)
24. ರಾಜ್ಯ ಪತ್ರಾಗಾರ ಇಲಾಖೆ(ಬಿಡಿ ಪ್ರತಿ ಶಾಖೆ)
25. ಗ್ರಾ.ಅ.ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ-10ಪ್ರತಿಗಳು.
26. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.